# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀಮತಿ ಬಸಮ್ಮ, ಅಧ್ಯಕ್ಷರು, ವಣೇನೂರು ಗ್ರಾಮ ಪಂಚಾಯಿತಿ, ಬಳ್ಳಾರಿ ತಾಲ್ಲೂಕು, ಬಳ್ಳಾರಿ ಜಿಲ್ಲೆ, ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ಮತ್ತು 48(4) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ಮುಖ್ಯಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕಲಬುರಗಿ ಇವರ ಪತ್ರ ಸಂಖ್ಯೆ ಜಿಪಂಬ/ಸಿಬ್ಬಂದಿ(3)ಗ್ರಾಪಂ/32/2015-16/11391, ದಿನಾಂಕ: 22.02.2016.
2. ಸರ್ಕಾರದ ಪತ್ರ ಸಂಖ್ಯೆ: ಸಂ.ಗ್ರಾಅಪ:322:ಗ್ರಾಪಂಅ:2016, ದಿನಾಂಕ:07.04.2016 ರ ಕಾರಣ ಕೇಳುವ ನೋಟಿಸ್ಸು.
3. ಶ್ರೀಮತಿ ಬಸಮ್ಮ, ಅಧ್ಯಕ್ಷರು, ವಣೇನೂರು ಗ್ರಾಮ ಪಂಚಾಯಿತಿ, ಇವರು ಕಾರಣ ಕೇಳುವ ನೋಟಿಸ್‌ಗೆ ನೀಡಿರುವ ಲಿಖಿತ ಹೇಳಿಕೆ ದಿನಾಂಕ: 31.05.2016.
4. ವಿಚಾರಣೆಗೆ ಹಾಜರಾಗುವ ತಿಳುವಳಿಕೆ ಪತ್ರ ದಿನಾಂಕ:06.01.2017, 25.01.2017.

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಲ್ಲಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಬಳ್ಳಾರಿ ರವರು, ತಮ್ಮ ಪ್ರಸ್ತಾವನೆಯಲ್ಲಿ ಬಳ್ಳಾರಿ ತಾಲ್ಲೂಕಿನ ವಣೇನೂರು ಗ್ರಾಮ ಪಂಚಾಯಿತಿಯಲ್ಲಿ ಸ್ವಚ್ಛ ಗ್ರಾಮ ಯೋಜನೆಯಡಿ 2014-2015 ನೇ ಸಾಲಿಗೆ ರೂ. 8,28,060/- ಗಳನ್ನು ಖರ್ಚು ಮಾಡಿ ಹಣ ದುರುಪಯೋಗ ಮಾಡಲಾಗಿದೆಂದು, 13ನೇ ಹಣಕಾಸಿನ ಯೋಜನೆಯಲ್ಲಿ ಆರ್ಥಿಕ ಹಣಕಾಸಿನ ನಿಯಮಗಳನ್ನು ಅನುಸರಿಸದೆ ರೂ. 49,600/-, 9,900/-, 94,000/-, 2,50,116/- ಗಳನ್ನು ಗ್ರಾಮ ಪಂಚಾಯಿತಿಯ ಅಧ್ಯಕ್ಷರು ಹಾಗೂ ಕಾರ್ಯದರ್ಶಿಗಳು ದುರುಪಯೋಗ ಪಡಿಸಿಕೊಂಡಿರುವ ಹಿನ್ನೆಲೆಯಲ್ಲಿ ಜಿಲ್ಲಾ ಪಂಚಾಯತ್‌ನ ಮುಖ್ಯ ಲೆಕ್ಕಾಧಿಕಾರಿ ರವರ ನೇತೃತ್ವದ ತನಿಖಾ ತಂಡದ ವರದಿ ಅನ್ವಯ ದಿನಾಂಕ:01.04.2015 ರಿಂದ 22.11.2015 ರವರೆಗೆ ಒಟ್ಟು ರೂ. 22,03,045/- ಗಳ ವ್ಯವಹಾರ ನಡೆದಿದ್ದು, ಈ ಅವಧಿಯಲ್ಲಿ ಕಾರ್ಯನಿರ್ವಹಿಸಿದ ಗ್ರಾಮ ಪಂಚಾಯತಿಯ ಹಿಂದಿನ ಅಧ್ಯಕ್ಷರು ಶ್ರೀಮತಿ ಗೌರಮ್ಮ, ಶ್ರೀಮತಿ ಬಸಮ್ಮ, ಹಾಲಿ ಅಧ್ಯಕ್ಷರು, ಶ್ರೀ ಆರ್ ಸತ್ಯ ನಾರಾಯಣ, ಪ್ರಭಾರಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವಣೇನೂರು ಗ್ರಾಮ ಪಂಚಾಯಿತಿ, ಇವರುಗಳು ಇದಕ್ಕೆ ಕಾರಣರಾಗಿರುತ್ತಾರೆಂದು ತಿಳಿಸಿರುತ್ತಾರೆ.

ಮುಖ್ಯ ಲೆಕ್ಕಾಧಿಕಾರಿಯವರ ವರದಿ ಹಿನ್ನಲೆಯಲ್ಲಿ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯಿತಿ ಬಳ್ಳಾರಿ ರವರು, ಶ್ರೀಮತಿ ಗೌರಮ್ಮ, ಹಿಂದಿನ ಅಧ್ಯಕ್ಷರು, ಶ್ರೀಮತಿ ಬಸಮ್ಮ, ಹಾಲಿ ಅಧ್ಯಕ್ಷರು ಹಾಗೂ ಶ್ರೀ ಆರ್ ಸತ್ಯನಾರಾಯಣ ಗ್ರೇಡ್-2 ಕಾರ್ಯದರ್ಶಿ, ವಣೇನೂರು ಗ್ರಾಮ ಪಂಚಾಯತಿ ಇವರುಗಳ ವಿರುದ್ಧ ಪ್ರಕರಣವನ್ನು ಬಳ್ಳಾರಿ ತಾಲೂಕಿನ ಮೋಕಾ ಪೋಲೀಸ್ ಠಾಣೆಯಲ್ಲಿ ಅಪರಾಧ ಸಂಖ್ಯೆ:0176/2015, ಐಪಿಸಿ 1860, ಕಲಂ 406, 408, 409, 417, 420, 34 ರನ್ವಯ ದಿನಾಂಕ: 12.12.2015 ರಂದು ದೂರು ದಾಖಲಿಸಲಾಗಿರುತ್ತದೆಂದು ತಿಳಿಸಿರುತ್ತಾರೆ.

ಈ ಹಿನ್ನೆಲೆಯಲ್ಲಿ, ಬಳ್ಳಾರಿ ತಾಲೂಕಿನ ವಣೇನೂರು ಗ್ರಾಮ ಪಂಚಾಯತಿಯಲ್ಲಿ ಹಣ ದುರುಪಯೋಗವು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ ಸದರಿ ಗ್ರಾಮ ಪಂಚಾಯತಿಯ ಹಾಲಿ ಅಧ್ಯಕ್ಷರಾದ ಶ್ರೀಮತಿ ಬಸಮ್ಮ ಅವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ 43 (ಎ) ರ ಉಪಬಂಧಗಳನ್ವಯ ಸದಸ್ಯತ್ವ ರದ್ದುಗೊಳಿಸಲು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ಸದರಿಯವರ ವಿರುದ್ದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 ರ ಪ್ರಕರಣ 43-ಎ ರ ಅಡಿ ಕ್ರಮ ವಹಿಸುವ ಪೂರ್ವದಲ್ಲಿ ನಿಯಮಾನುಸಾರ ಕಾರಣ ಕೇಳುವ ನೋಟಿಸ್ಸನ್ನು ದಿನಾಂಕ: 07.04.2016 ರಂದು ಜಾರಿ ಮಾಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಲ್ಲಿ ಸದರಿಯವರು ದಿನಾಂಕ:31.05.2016 ರಂದು ಕಾರಣ ಕೇಳುವ ನೋಟಿಸ್ಸಿಗೆ ಈ ಕೆಳಕಂಡಂತೆ ಉತ್ತರ ಸಲ್ಲಿಸಿರುತ್ತಾರೆ.

ಸದರಿಯವರು ತಮ್ಮ ಲಿಖಿತ ಹೇಳಿಕೆಯಲ್ಲಿ ಅವರು ವಣೇನೂರು ಗ್ರಾಮ ಪಂಚಾಯಿತಿಯ ಒಂದನೇ ವಾರ್ಡ್‌ನಿಂದ ಪರಿಶಿಷ್ಟ ಜಾತಿ ಮೀಸಲಾತಿಯನ್ವಯ ಚುನಾವಣೆಯಲ್ಲಿ ಸ್ಪರ್ಧಿಸಿ 2015 ರಲ್ಲಿ ಗ್ರಾಮ ಪಂಚಾಯಿತಿಯ ಅಧ್ಯಕ್ಷ ಸ್ಥಾನವನ್ನು ಅಲಂಕರಿಸಿರುವುದಾಗಿ, ಅವರು ಮೂಲತಃ ಅವಿದ್ಯಾವಂತರಾಗಿದ್ದು, ಅವರಿಗೆ ಸಹಿ ಮಾಡಿರುವುದನ್ನು ಹೊರತು ಪಡಿಸಿ ಯಾವುದೇ ಭಾಷೆ ಓದಲು ಬರೆಯಲು ಬರುವುದಿಲ್ಲವೆಂದು ತಿಳಿಸಿರುತ್ತಾರೆ ಹಾಗೂ ದಿನಾಂಕ:01.04.2015 ರಿಂದ 22.11.2015 ರವರೆಗೆ ಒಟ್ಟು 22,03,045/- ಗಳ ವ್ಯವಹಾರ ನಡೆದಿದ್ದು, 2,50,116/- ಗಳನ್ನು ಗ್ರಾಮ ಪಂಚಾಯಿತಿ ಅಧ್ಯಕ್ಷರು ದುರುಪಯೋಗ ಪಡಿಸಿಕೊಂಡಿರುತ್ತಾರೆಂದು ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಬಳ್ಳಾರಿ ಇವರು ವರದಿಯಲ್ಲಿ ತಿಳಿಸಿದ್ದು, ಸದರಿಯವರು ಯಾವುದೇ ತರಹದ ಅವ್ಯವಹಾರಗಳನ್ನು ಮಾಡಿರುವುದಿಲ್ಲ ಹಾಗೂ ಯಾವುದೇ ಹಣ ದುರ್ಬಳಕೆ ಮಾಡಿಕೊಂಡಿರುವುದಿಲ್ಲವೆಂದು, ಸದರಿಯವರು ಮೂಲತಃ ಪರಿಶಿಷ್ಟ ಜಾತಿಗೆ ಸೇರಿದ ಮಹಿಳೆ ಆದ ಕಾರಣ ಅವರ ತೇಜೋವಧೆ ಮಾಡಲು ಸುಳ್ಳು ಆರೋಪವನ್ನು ಅವರ ವಿರುದ್ಧ ಮಾಡಿರುತ್ತಾರೆಂದು ತಿಳಿಸಿರುತ್ತಾರೆ. ಅವರ ವಿರುದ್ಧ ಮೋಕಾ ಆರಕ್ಷಕ ಠಾಣೆಯಲ್ಲಿ ಗುನ್ನೆ ನಂ.176/2015 ಪ್ರಕರಣವು ನೊಂದಾಣಿಯಾಗಿದ್ದು, ಭಾರತ ದಂಡ ಸಂಹಿತೆಯ ಕಲಂಗಳಾದ 406, 408, 409, 417, 420, 34 ರನ್ವಯ ಪ್ರಕರಣ ನೊಂದಾವಣೆಯಾಗಿರುವುದು ಸತ್ಯವಾಗಿದ್ದು, ಅದು ಸುಳ್ಳು ಆರೋಪವಾಗಿರುತ್ತದೆಂದು, ಸದರಿ ಪ್ರಕರಣವು ತನಿಖೆ ಹಂತದಲ್ಲಿದ್ದು, ಮಾನ್ಯ ನ್ಯಾಯಾಲಯದಿಂದ ಇತ್ಯರ್ಥವಾಗುವರೆಗೂ ಅವರನ್ನು ಸದಸ್ಯ ಸ್ಥಾನದಿಂದ ಕೆಳಗಿಳಿಸಬಾರದೆಂದು ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (4) ರಲ್ಲಿ ಸದರಿ ಆಪಾದಿತರಿಗೆ ವಿಚಾರಣೆಗೆ ಹಾಜರಾಗಲು ತಿಳುವಳಿಕೆ ಪತ್ರವನ್ನು ಹೊರಡಿಸಲಾಗಿದ್ದು, ಮಾನ್ಯ ಪ್ರಧಾನ ಕಾರ್ಯದರ್ಶಿಯವರ ನ್ಯಾಯಾಲಯದ ವಿಚಾರಣೆಗೆ ದಿನಾಂಕ:07.02.2017 ರಂದು ಸದರಿಯವರು ಹಾಜರಿರುತ್ತಾರೆ ಹಾಗೂ ತಮ್ಮ ಹೇಳಿಕೆಯನ್ನು ತಿಳಿಸಿರುತ್ತಾರೆ.

ಮಾನ್ಯ ಪ್ರಧಾನ ಕಾರ್ಯದರ್ಶಿಯವರ ನ್ಯಾಯಾಲಯದಲ್ಲಿ ದಿನಾಂಕ:10.04.2017 ರಂದು ಮುಖ್ಯಕಾರ್ಯನಿರ್ವಾಹಕ ಅಧಿಕಾರಿಯವರ ವರದಿ, ಸದರಿಯವರು ನೀಡಿರುವ ಲಿಖಿತ ಹೇಳಿಕೆ ಹಾಗೂ ಇತರ ದಾಖಲೆಗಳನ್ನು ಪರಿಶೀಲಿಸಿ, ಸರ್ಕಾರವು ಈ ಪ್ರಕರಣದಲ್ಲಿನ ವಾಸ್ತವಾಂಶಗಳನ್ನು ಮನದಟ್ಟು ಮಾಡಿಕೊಂಡು, ಶ್ರೀಮತಿ ಬಸಮ್ಮ, ಅಧ್ಯಕ್ಷರು, ವಣೇನೂರು ಗ್ರಾಮ ಪಂಚಾಯಿತಿ, ರವರು ಸರ್ಕಾರದ ಹಣ ದುರುಪಯೋಗ ಪಡಿಸಿಕೊಂಡು ಕರ್ತವ್ಯಲೋಪ ಎಸಗಿರುವುದು ರುಜುವಾತಾಗಿರುವುದರಿಂದ ಸರ್ಕಾರವು ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 ರ ಪ್ರಕರಣ 43(ಎ) ಮತ್ತು 48(4) ರನ್ವಯ ಗ್ರಾಮ ಪಂಚಾಯಿತಿ ಅಧ್ಯಕ್ಷ ಸ್ಥಾನ ಹಾಗೂ ಸದಸ್ಯತ್ವ ಎರಡನ್ನೂ ತೆಗೆದು ಹಾಕಲು ನಿರ್ಣಯಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/322/ಗ್ರಾಪಂಅ/2016**

ಬೆಂಗಳೂರು, ದಿನಾಂಕ:-01-07-2017.

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀಮತಿ ಬಸಮ್ಮ, ಅಧ್ಯಕ್ಷರು, ವಣೇನೂರು ಗ್ರಾಮ ಪಂಚಾಯಿತಿ, ಬಳ್ಳಾರಿ ತಾಲ್ಲೂಕು, ಬಳ್ಳಾರಿ ಜಿಲ್ಲೆ, ಇವರು ಸರ್ಕಾರದ ಹಣ ದುರುಪಯೋಗ ಪಡಿಸಿಕೊಂಡು ಕರ್ತವ್ಯಲೋಪ ಎಸಗಿರುವುದು ರುಜುವಾತಾಗಿರುವುದರಿಂದ ಇವರನ್ನು ವಣೇನೂರು ಗ್ರಾಮ ಪಂಚಾಯಿತಿಯ ಅಧ್ಯಕ್ಷ ಸ್ಥಾನ ಹಾಗೂ ಸದಸ್ಯತ್ವ ಎರಡನ್ನೂ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು

ಪಂಚಾಯತ್ ರಾಜ್ ಕಾಯ್ದೆ 1993 ರ ಪ್ರಕರಣ 43(ಎ) ಮತ್ತು 48(4) ರನ್ವಯ ತೆಗೆದು ಹಾಕಿ ತಕ್ಷಣದಿಂದ ಜಾರಿಗೆ ಬರುವಂತೆ ಆದೇಶಿಸಿದೆ.

(ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)
ಗ್ರಾಅಪ ಇಲಾಖೆ ರವರಿಂದ ಅನುಮೋದಿತ)

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ,**

1. ಮುಖ್ಯಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬಳ್ಳಾರಿ ಜಿಲ್ಲೆ.
2. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬಳ್ಳಾರಿ ತಾಲ್ಲೂಕು, ಬಳ್ಳಾರಿ ಜಿಲ್ಲೆ.
3. ಶ್ರೀಮತಿ ಬಸಮ್ಮ, ಅಧ್ಯಕ್ಷರು, ವಣೇನೂರು ಗ್ರಾಮ ಪಂಚಾಯಿತಿ, ಬಳ್ಳಾರಿ ತಾಲ್ಲೂಕು, ಬಳ್ಳಾರಿ ಜಿಲ್ಲೆ.
4. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ವಣೇನೂರು ಗ್ರಾಮ ಪಂಚಾಯಿತಿ, ಬಳ್ಳಾರಿ ತಾಲ್ಲೂಕು, ಬಳ್ಳಾರಿ ಜಿಲ್ಲೆ.
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.
6. ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.